ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಕೋರ್ಟ್ ಮಾಹಿತಿ

ಪತ್ರಿಕೆಯ ಹೆಸರು : NAME OF THE NEWS PAPER : ವಿಜಯವಾಣಿ

ದಿನಾಂಕ : DATE : 17/04/2019

# ಮುಂಬಡ್ತಿ-ಹಿಂಬಡ್ತಿ ವಿವರ ಸಲ್ಲಿಸಿದ ಸರ್ಕಾರ

ಬೆಂಗಳೂರು: ಕರ್ನಾಟಕ ಲೋಕಸೇವಾ ಆಯೋಗದ (ಕೆಪಿಎಸ್‌ಸಿ) 1998ನೇ ಸಾಲಿನ ನೇಮಕಾತಿ ಹಗರಣ ಸಂಬಂಧ ಹೈಕೋರ್ಟ್ ತೀರ್ಪಿನಂತೆ ಸಿದ್ಧಪಡಿಸಲಾಗಿರುವ ಪರಿಷ್ಕೃತ ಪಟ್ಟಿ ಅನುಸಾರ 140 ಅಧಿಕಾರಿಗಳಿಗೆ ಮುಂಬಡ್ತಿ-ಹಿಂಬಡ್ತಿ ನೀಡಿ ಆದೇಶ ಹೊರಡಿಸಿರುವುದಾಗಿ ಸರ್ಕಾರ ಮಂಗಳವಾರ ನ್ಯಾಯಾಲಯಕ್ಕೆ ಮಾಹಿತಿ ನೀಡಿದೆ. ಪ್ರಕರಣದ ಸಂಬಂಧ 2016ರ ಜೂ.21ರಂದು ಹೈಕೋರ್ಟ್ ವಿಭಾಗೀಯ ಪೀಠ ನೀಡಿದ್ದ ತೀರ್ಪು ಜಾರಿಗೊಳಿಸದ ಸರ್ಕಾರದ ವಿರುದ್ಧ ಎಸ್. ಶ್ರೀನಿವಾಸ್ ಮತ್ತಿತರ ಅಭ್ಯರ್ಥಿಗಳು ಸಲ್ಲಿಸಿದ್ದ ನ್ಯಾಯಾಂಗ ನಿಂದನೆ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಬಿ.ವಿ.ನಾಗರತ್ನ ಹಾಗೂ ನ್ಯಾಯಮೂರ್ತಿ ಎಚ್.ಟಿ. ನರೇಂದ್ರ ಪ್ರಸಾದ್ ಅವರಿದ್ದ ಪೀಠಕ್ಕೆ ಅಡ್ವೊಕೇಟ್ ಜನರಲ್ ಉದಯ ಹೊಳ್ಳ ಈ ಸಂಬಂಧ ಮೆಮೊ ಸಲ್ಲಿಸಿದರು. ಮುಂಬಡ್ತಿ-ಹಿಂಬಡ್ತಿ ಪಡೆದಿರುವ 140 ಅಧಿಕಾರಿಗಳ ಪೈಕಿ 115 ಮಂದಿ ಮಾತ್ರ ಹಾಲಿ ಸರ್ಕಾರಿ ಕರ್ತವ್ಯದಲ್ಲಿದ್ದು, ರಾಜೀನಾಮೆ, ಮರಣ, ನಿವೃತ್ತಿ ಇನ್ನಿತರ ಕಾರಣಗಳಿಂದ 25 ಮಂದಿ ಹುದ್ದೆಯಲ್ಲಿಲ್ಲ. 115 ಮಂದಿಗೆ ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿರುವ ಕಾರಣ ಹುದ್ದೆ ತೋರಿಸಲು ಸಾಧ್ಯವಾಗಿಲ್ಲ ಎಂದು ಎಜಿ ನ್ಯಾಯಪೀಠಕ್ಕೆ ತಿಳಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ನ್ಯಾಯಪೀಠ, ಕೋರ್ಟ್ ಆದೇಶಗಳ ಜಾರಿಗೆ ಚುನಾವಣಾ ನೀತಿ ಸಂಹಿತೆ ಅಡ್ಡಿಯಾಗುವುದಿಲ್ಲ ಎಂದು ಹೇಳಿತು. ಜತೆಗೆ ಸರ್ಕಾರ ಸಲ್ಲಿಸಿರುವ ಸ್ಥಾನಪಲ್ಲಟ ಆದೇಶಕ್ಕೆ ಅರ್ಜಿದಾರರ ಆಕ್ಷೇಪಣೆಗಳಿದ್ದಲ್ಲಿ ಸಲ್ಲಿಸುವಂತೆ ಸೂಚಿಸಿ, ವಿಚಾರಣೆಯನ್ನು ಏ.25ಕ್ಕೆ ಮುಂದೂಡಿತು.



4